# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯದ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 20-02-2021ರಂದು ಮಲ್ಲಸಂದ್ರ ವಾರ್ಡ್ ನಂ.13ರಲ್ಲಿ ನಡೆಸಲಾದ ವಾರ್ಡ್ ಸಭೆ ನಡವಳಿಕೆಗಳು

ದಿನಾಂಕ: 20-02-2021ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಾಸರಹಳ್ಳಿ ವಲಯದ ಮಲ್ಲಸಂದ್ರ ವಾರ್ಡ್ ಸಂಖ್ಯೆ 13ರ ಕಛೇರಿಯಲ್ಲಿ ವಾರ್ಡ್ ಸಭೆಯನ್ನು ನಡೆಸಲಾಗಿದೆ. ಸದರಿ ಸಭೆಯಲ್ಲಿ ನೋಡಲ್ ಅಧಿಕಾರಿಗಳಾದ ಡಾ.ಸುರೇಶ್.ಎಸ್‌ರವರು, ಸಹಾಯಕ ಅಭಿಯಂತರರಾದ ಶ್ರೀ ವೆಂಕಟೇಶಪ್ಪರವರು, ಆರೋಗ್ಯ ಇಲಾಖೆಯ ಶ್ರೀ ಪಾರ್ಥರವರು, ಘನತ್ಯಾಜ್ಯ ನಿರ್ವಹಣೆಯ ಶ್ರೀ ಲೋಹಿತ್‌ಕುಮಾರ್, ವಿದ್ಯುತ್ ಉಪವಿಭಾಗದಿಂದ ಶ್ರೀ ಶಶಿ (ಬೀದಿ ದೀಪ ನಿರ್ವಹಣೆ) ಕಲ್ಯಾಣ ಇಲಾಖೆಯ ಶ್ರೀ.ವೆಂಕಟರಾಯಪ್ಪ, ಬೆಂಗಳೂರು ಜಲ ಮಂಡಳಿಯಿಂದ ಲೋಕನಾಥ, ಇನ್ಸ್‌ಪೆಕ್ಟರ್ ಪಶುಪಾಲನೆ ಇಲಾಖೆಯಿಂದ ಶ್ರೀಮತಿ ಕೆ.ಎಸ್ ಸುಧಾಮಣಿ ಭಾಗವಹಿಸಿದ್ದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ನಿರ್ಣಯಗಳನ್ನು ತೀರ್ಮಾನಿಸಲಾಗಿದೆ.

- **ವಿದ್ಯುತ್ ವಿಭಾಗಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ**

1. ವಾರ್ಡ್‌ಗಳಲ್ಲಿ ಬೀದಿ ದೀಪಗಳ ಬಗ್ಗೆ ದೂರುಗಳು ಬಂದಾಗ ಬಂದಿರುವ ದೂರಿನ ಸ್ಥಳದ ಜಿ.ಪಿ.ಎಸ್. ಪೋಟೋವನ್ನು ಹಾಕಿ ಅದಷ್ಟು ಬೇಗನೆ ಸಮಸ್ಯೆಯನ್ನು ಪರಿಹರಿಸಲು ಸೂಚಿಸಲಾಯಿತು.
2. ವಾರ್ಡ್‌ಗಳಲ್ಲಿ ಬೀದಿ ದೀಪಗಳ ನಿರ್ವಹಣೆಗೆ ಸಂಬಂಧಿಸಿದ ಗುತ್ತಿಗೆದಾರರನ್ನು ಮುಂದಿನ ಸಭೆಗೆ ಹಾಜರಾಗಲು ಎಲ್ಲಾ ವಾರ್ಡ್ ಸದಸ್ಯರುಗಳು ಕೋರಿದ್ದು ಅದರಂತೆ ಗುತ್ತಿಗೆದಾರರನ್ನು ಮುಂದಿನ ಸಭೆಗೆ ಹಾಜರಾಗಲು ಸೂಚಿಸಲಾಯಿತು.

- **ಕಂದಾಯ ಇಲಾಖೆಗೆ ಸಂಬಂಧಪಟ್ಟ ವಿಷಯಗಳ ಬಗ್ಗೆ**

ವಾರ್ಡ್ ನಂ. 13ರಲ್ಲಿ ಇರುವ ಮಲ್ಲಸಂದ್ರ ಕೆರೆಯ ಉಸ್ತುವರಿಯನ್ನು ಈಗಾಗಲೇ ಲೇಕ್ ಎ.ಇ.ಇ. ರವರು ಕೆರೆಯ ಬೌಂಡರಿಯನ್ನು ಮಾರ್ಕ್ ಮಾಡಿ ತೆರೆವುಗೋಳಿಸಲು ಸೂಚಿಸಿರುತ್ತಾರೆ. ಆದರೆ ವಾರ್ಡ್ ಸಮಿತಿಯ ಎಲ್ಲಾ ಸದಸ್ಯರು ಹಾಲಿ ಮಾಡಿರುವ ಮಾರ್ಕ್ ಸರಿ ಇಲ್ಲಾ ಅದ್ದರಿಂದ ಮತ್ತೊಮ್ಮೆ ಕೆರೆಯ ಸರ್ವೆ ಮಾಡಿ, ಗಡಿಯನ್ನು ಗುರುತಿಸಲು ಕೋರಿರುತ್ತಾರೆ. ಅದರಂತೆ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ತುರ್ತಾಗಿ ಸರ್ವೆ ಮಾಡಿಸಿ ಕೆರೆಯ ಹದ್ದು ಬಸ್ತುನ್ನು ಫಿಕ್ಸ್ ಮಾಡಿಸಿಕೊಡಲು ಸಭೆಯಲ್ಲಿ ಸೂಚಿಸಲಾಯಿತು ಮತ್ತು ಲೇಕ್ ಎಇಇ ರವರಿಗೆ ಈ ಸಂಬಂಧ ತುರ್ತಾಗಿ ಕ್ರಮ ಕೈಗೊಳ್ಳಲು ಸೂಚಿಸಲಾಯಿತು

- **ಆರೋಗ್ಯ ಇಲಾಖೆ ಹಾಗೂ ಘನತ್ಯಾಜ್ಯ ವಿಭಾಗಕ್ಕೆ ಸಂಬಂಧಪಟ್ಟ ವಿಷಯಗಳ ಬಗ್ಗೆ.**

  ಆರೋಗ್ಯ ಇಲಾಖೆಯ ಶ್ರೀ ಪಾರ್ಥರವರು (ಹಿರಿಯ ಆರೋಗ್ಯಾಧಿಕಾರಿಗಳು)

Scanned with CamScanner

1. ವಾರ್ಡ್ 13ರ ಸಮಿತಿ ಸದಸ್ಯರಾದ ಶ್ರೀ ಬೈಲಪ್ಪರವರು ರವೀಂದ್ರನಗರ, 1ನೇ ಅಡ್ಡರಸ್ತೆಯಿಂದ 11ನೇ ಅಡ್ಡರಸ್ತೆವರೆಗೆ ಸರಿಯಾಗಿ ಕಸವನ್ನು ತೆಗೆಯುತ್ತಿಲ್ಲ ಎಂದು ಆಕ್ಷೇಪಸಿದರು ಉತ್ತರವಾಗಿ ಶ್ರೀ ಲೋಹಿತ್ ಕಿರಿಯ ಆರೋಗ್ಯ ಪರೀವಿಕ್ಷಕರು ರವರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
2. ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಪ್ರತಿ ದಿನ ಕೋವಿಡ್-19 ಟೆಸ್ಟ್ ಮಾಡಲಾಗುತ್ತಿದೆ. ಲಿಂಕ್ ವರ್ಕರ್ಸ್‌ಗಳು ಆಸ್ಪತ್ರೆಯಿಂದ ಮೆಡಿಕಲ್ ಕಿಟ್‌ಗಳನ್ನು ಪಡೆದು ರೋಗಿಗಳ ಸ್ಥಳಕ್ಕೆ ನೀಡುವ ಕೆಲಸ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಕ್ಯಾಂಪ್ ನಡೆಸುವ ಕಾರ್ಯವನ್ನು ಮಾಡುತ್ತಿದಾರೆ ಹಾಗು ವಾರದಲ್ಲಿ ಮೂರು ದಿವಸ ಹೋಮ್ ಕ್ವಾರೆಂಟೈನ್ ಆದವರನ್ನು ಬೇಟಿ ಮಾಡಿ ಯೋಗಕ್ಷೇಮ ವಿಚಾರಿಸುತ್ತಿದಾರೆ ಎಂದು ತಿಳಿಸಿದರು.
3. ವಾರ್ಡ್ ನಂ.13 ರ ಸಮಿತಿ ಸದಸ್ಯರಾದ ಶ್ರೀ ಬೈಲಪ್ಪರವರು ಮಾತನಾಡಿ ರವೀಂದ್ರನಗರದಲ್ಲಿ ತಮ್ಮ 2800 ಮನೆಗಳು ಇದ್ದು, ಕಸವನ್ನು ತೆಗೆಯಲು 2 ಬ್ಲಾಕ್ ಫಿಕ್ಸ್ ಮಾಡಿದ್ದಾರೆ, ಕಾನೂನಿನ ಪ್ರಕಾರ 750 ಮನೆಗಳಿಗೆ ಒಂದು ಬ್ಲಾಕ್ ಫಿಕ್ಸ್ ಮಾಡಿದ್ದು, ಅದರಂತೆ ಎಕ್ಸ್ಟ್ರಾ ಇನ್ನು ಹೆಚ್ಚುವರಿಯಾಗಿ 2 ಬ್ಲಾಕ್ ಫಿಕ್ಸ್ ಮಾಡಲು ಕೋರಿರುತ್ತಾರೆ.

- **ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮಲ್ಲಸಂದ್ರ ರಸ್ತೆ ವಿಭಾಗ ಕಛೇರಿಗೆ ಸಂಬಂಧಪಟ್ಟ ವಿಷಯಗಳ ಬಗ್ಗೆ.**
- ಮಲ್ಲಸಂದ್ರ-ಶೆಟ್ಟಿಹಳ್ಳಿ ಮುಖ್ಯರಸ್ತೆಯಲ್ಲಿ ಹಳೆಯ ಪಶುವೈದ್ಯ ಶಾಲೆಯ ಹತ್ತಿರ ಎರಡು ರಸ್ತೆ ವಿಭಜಕಗಳನ್ನು ನಿರ್ಮಿಸಿಕೊಡಲು ಸಂಬಂಧಪಟ್ಟ ರಸ್ತೆ ಇಲಾಖೆಯವರಿಗೆ ಸೂಚಿಸಲು ಶ್ರೀ ಪಶುಪತಿರವರು ವಾರ್ಡ್ ಸಮಿತಿ ಸದಸ್ಯರು ಕೋರಿದ್ದು ಅದರಂತೆ ವಿಭಜಕಗಳನ್ನು ನಿರ್ಮಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.
- **ಬಿ.ಡ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಪಟ್ಟ ವಿಷಯಗಳ ಬಗ್ಗೆ.**

  ಹಾಲಿ ಮಲ್ಲಸಂದ್ರ ವಾರ್ಡ್‌ನಲ್ಲಿ ಹಲವಾರು ಕಡೆ ರಸ್ತೆಗಳನ್ನು ಅಗೆದು ಒಳಚರಂಡಿ ಮತ್ತು ಕಾವೇರಿ ಪೈಪ್‌ಗಳನ್ನು ಅಳವಡಿಸುವುದು ಕಂಡು ಬಂದಿದ್ದು, ಈ ಕಾಮಗಾರಿಗಳನ್ನು ನಿರ್ವಹಿಸುವ ಮೊದಲು ಯಾವ ರಸ್ತೆಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಲಾಗುತ್ತಿದೆ ಎಂಬ ಬಗ್ಗೆ ವಾರ್ಡ್‌ನ ಬಿಬಿಎಂಪಿ ಇಂಜಿನಿಯರ್‌ವರಿಗೆ ಮಾಹಿತಿ ನೀಡಲು ಸೂಚಿಸಿ ಹಾಗೂ ಈ ಕಾಮಗಾರಿಗಳಿಗೆ ಸಂಬಂಧಿಸಿದ ಅಂದಾಜು ಪಟ್ಟಿಗಳು ಹಾಗೂ ನೀಡಿರುವ ಬಿಲ್ಲುಗಳ ವಿವರಗಳನ್ನು ವಾರ್ಡ್ ಸಮಿತಿಗೆ ಪ್ರತಿ ಸಭೆಗೆ ಸಲ್ಲಿಸಲು ಸೂಚಿಸಲಾಯಿತು. ಮತ್ತು ಹಾಲಿ ಬಿ.ಡ್ಲ್ಯೂ.ಎಸ್.ಎಸ್.ಬಿ ರವರು ರಸ್ತೆಗಳಲ್ಲಿ ಅಗೆದಿರುವ ಕಾಂಕ್ರೀಟ್/ಮಣ್ಣನ್ನು ತೆಗದು "Wetmix macdom" ಹಾಕಿ ಸಾರ್ವಜನಿಕರು ಓಡಾಡಲು ಅನುಕೂಲ ಮಾಡಿಕೊಡುವಂತೆ ಸೂಚಿಸಲಾಯಿತು

**ಇತರೆ ವಿಷಯಗಳು**

1. ವಾರ್ಡ್ ನಂ.13 ರ ಮಲ್ಲಸಂದ್ರದಲ್ಲಿ ಒಣಕಸವನ್ನು ಸಂಗ್ರಹಿಸಲು ತುರ್ತಾಗಿ ಒಣಕಸ ಕೇಂದ್ರವನ್ನು ತುರ್ತಾಗಿ ನಿರ್ಮಿಸಿಕೊಡಲು ಸಮಿತಿಯಲ್ಲಿ ಚರ್ಚಿಸಿ ತೀರ್ಮಾನಿಸಲಾಯಿತು.

Scanned with CamScanner

2. ಪೈಪ್ ಲೈನ್ ಪಾರ್ಕ್‌ನಲ್ಲಿ ರಾತ್ರಿ ಸಮಯದಲ್ಲಿ ಅನಧಿಕೃತ ಚಟುವಟಿಕೆಗಳು ನಡೆಯುತ್ತಿರುವುದು ಕಂಡು ಬಂದಿದ್ದು, ಎಲ್ಲಾ ಪಾದಚಾರಿ ಮಾರ್ಗಗಳಲ್ಲಿ ಗೇಟ್ ಅಳವಡಿಸಲು ಸಂಬಂಧಪಟ್ಟ ತೋಟಗಾರಿಕೆ ಇಲಾಖೆಯವರಿಗೆ ಸೂಚಿಸಲಾಯಿತು.

3. ಬಿ.ಹೆಚ್.ಇ.ಎಲ್. ಮಿನಿ ಕಾಲೋನಿ ಮುನೇಶ್ವರ ಬ್ಲಾಕ್, ಸಂತೋಷನಗರ, ಕಲ್ಯಾಣನಗರ, ಪ್ರಶಾಂತನಗರ, ಮಹೇಶ್ವರಿನಗರದ ನಿವಾಸಿಗಳಲ್ಲಿ ಕುಡಿಯುವ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡುವ ಸಲುವಾಗಿ, ಮಲ್ಲಸಂದ್ರದ ಗುಟ್ಟೆ ವ್ಯಾಪ್ತಿಯಲ್ಲಿ ನೆಲಮಟ್ಟದ ನೀರು ಸಂಗ್ರಹಾಲಯವನ್ನು ನಿರ್ಮಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು. ಈ ವಿಷಯದ ಬಗ್ಗೆ ಈಗಾಗಲೇ ಸನ್ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ ರವರ ಗಮನಕ್ಕೆ ಕೂಡ ತರಲಾಗಿದೆ.

| | |
|---|---|
| ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು,<br>ವಾರ್ಡ್ ಸಂಖ್ಯೆ.13 ಮಲ್ಲಸಂದ್ರ | ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ<br>ವಾರ್ಡ್ ಸಂಖ್ಯೆ.13, ಮಲ್ಲಸಂದ್ರ |

ಪ್ರತಿಯನ್ನು:-

1. ಮಾನ್ಯ ಆಯುಕ್ತರು, ಬಿಬಿಎಂಪಿ ನರಸಿಂಹರಾಜ ಚೌಕ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ಅಧ್ಯಕ್ಷರು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
3. ಮಾನ್ಯ ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
4. ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
5. ಕಾರ್ಯಪಾಲಕ ಅಭಿಯಂತರರು, (ಯೋಜನಾ ವಿಭಾಗ) ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
6. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ. ಡಬ್ಲ್ಯೂ.ಎಸ್.ಎಸ್.ಬಿ ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
8. ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಎಂ. ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
9. ಕಲ್ಯಾಣಾಧಿಕಾರಿಗಳು, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
10. ಸಹಾಯಕ ನಿರ್ದೇಶಕರು, (ಪಶುಪಾಲನೆ) ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
11. ಸಹ ಕಂದಾಯ ಅಧಿಕಾರಿ, ಮಲ್ಲಸಂದ್ರ ಉಪ ವಿಭಾಗ, ದಾಸರಹಳ್ಳಿ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.

Scanned with CamScanner